21

4KK 06/02

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನಾ ಸಿದ್ದಿ ಇವರು ನಿಯಮ-72ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

**ಸೂಚನೆ:-**

ಒಳಮೀಸಲಾತಿ ವರ್ಗೀಕರಣವನ್ನು ಪರಿಶಿಷ್ಟ ಜಾತಿಗವರಿಗಷ್ಟೆ ಅಲ್ಲದೆ ಪರಿಶಿಷ್ಟ ಪಂಗಡಗಳಿಗೂ ಮೀಸಲಾತಿ ವರ್ಗಿಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು 2024 ಆಗಸ್ಟ್ 1 ರಂದು ಸುಪ್ರೀಂ ಕೋರ್ಟ್‌ನ ಏಳು ಸದಸ್ಯರ ಸಂವಿಧಾನ ಪೀಠವು ಸ್ಪಷ್ಟವಾಗಿ ತೀರ್ಪು ನೀಡಿರುತ್ತದೆ. ಆದರೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿಗಳಲ್ಲಿ ಮಾತ್ರ ಮೀಸಲಾತಿ ವರ್ಗಿಕರಣ ಮಾಡಿದ್ದು, ಪರಿಶಿಷ್ಟ ಪಂಗಡಗಳಲ್ಲಿಯೂ ಸಹ ಒಳಮೀಸಲಾತಿ ವರ್ಗೀಕರಣ ಮಾಡಿ ಎಲ್ಲಾ ಬುಡಕಟ್ಟು ಸಮುದಾಯಗಳಿಗೂ ಸಹ ಸಮಾನ ಸ್ಥಾನಮಾನದ ಅವಕಾಶ ಸಿಗುವಂತೆ ಆಗಬೇಕೆಂಬ ಸಾರ್ವಜನಿಕ ಮಹತ್ವದ ವಿಷಯದ ಕುರಿತು ಸದನದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:-**

2011ರ ಜನಗಣತಿ ಪ್ರಕಾರ ಪರಿಶಿಷ್ಟ ಪಂಗಡದ ಜನಸಂಖ್ಯೆ:42,48,987 ಇರುತ್ತದೆ. ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ 50 ಸಮುದಾಯಗಳು ಸೇರಿರುತ್ತವೆ. ಪರಿಶಿಷ್ಟ ಪಂಗಡಗಳಲ್ಲಿಯೂ ಸಹ ಒಳಮೀಸಲಾತಿ ವರ್ಗೀಕರಣ ಮಾಡುವ ಕುರಿತಾದ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

**ಸಂಖ್ಯೆ: STW/SECB/SAD/11/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು